Akashvani: Bangalore
Regional Bulletin In Kannada
25.08.2025 : 14.30hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

*******

**ಮುಖ್ಯಾಂಶಗಳು:**

1. ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣ; - ೬೦ ದಿನಗಳಲ್ಲಿ ಆರೋಪ ಪಟ್ಟಿ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ
2. ಧರ್ಮಸ್ಥಳ ಪ್ರಕರಣ; ಎಸ್‌ಐಟಿ ತನಿಖೆಗೆ ಕಾಲಾವಕಾಶ ನಿಗದಿಗೊಳಿಸಿಲ್ಲ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ
3. ಅಕ್ರಮ ಬೆಟ್ಟಿಂಗ್ ಪ್ರಕರಣ; ಶಾಸಕ ಕೆ.ಸಿ. ವೀರೇಂದ್ರ ವಿದೇಶ ವ್ಯವಹಾರಗಳ ಕುರಿತಂತೆ ವಿಚಾರಣೆ ತೀವ್ರಗೊಳಿಸಿದ ಇಡಿ
4. ರಾಜ್ಯದ ವಿವಿಧೆಡೆ ಗೌರಿ-ಗಣೇಶ, ಈದ್ ಮಿಲಾದ್‌ಗೆ ಸಿದ್ಧತೆ; ಪೊಲೀಸರಿಂದ ಕಟ್ಟೆಚ್ಚರ
5. ಮಹಾರಾಜ ಟಿ-೨೦ ಕ್ರಿಕೆಟ್; ಇಂದಿನ ಪಂದ್ಯದಲ್ಲಿ ನಮ್ಮ ಶಿವಮೊಗ್ಗ - ಹುಬ್ಬಳ್ಳಿ ಟೈಗರ್ಸ್ ಹಾಗೂ ಮಂಗಳೂರು ಡ್ರ್ಯಾಗನ್ಸ್ - ಗುಲ್ಬರ್ಗಾ ಮಿಸ್ಟ್ರಿಸ್ ಮುಖಾಮುಖಿ

*******

ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿಧಾನಸೌಧಲ್ಲಿಂದು ನಡೆದ ರಾಜ್ಯ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ೬೦ ದಿನಗಳ ಒಳಗಾಗಿ ಆರೋಪ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲು ಸೂಚನೆ ನೀಡಲಾಗಿದೆ. ಕಳೆದ ಆರು ತಿಂಗಳಲ್ಲಿ ಶೇಕಡ ೮೪ ರಷ್ಟು ಪ್ರಕರಣಗಳಲ್ಲಿ ಮಾತ್ರ ನಿಗದಿತ ಅವಧಿಯ ಒಳಗಾಗಿ ಆರೋಪ ಪಟ್ಟಿ ಸಲ್ಲಿಸಲಾಗಿದೆ. ಶೇಕಡ ೧೦೦ರಷ್ಟು ಪ್ರಕರಣಗಳಲ್ಲಿ ೬೦ದಿನಗಳ ಒಳಗಾಗಿ ಕಡ್ಡಾಯವಾಗಿ ಆರೋಪ ಪಟ್ಟಿ ಸಲ್ಲಿಸಲು ಕ್ರಮಕೈಗೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ. "ಪೊಲೀಸರು ಇಂತಹ ಪ್ರಕಣದಲ್ಲಿ ಯಾವುದೇ ನೆಪ ಹೇಳಬಾರದು. ನ್ಯಾಯಾಲಯದಲ್ಲಿ ೫೬ ಪ್ರಕರಣಗಳಲ್ಲಿ ತಡೆಯಾಜ್ಞೆ ಇದ್ದು, ಇದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ. ಆರೋಪಿಗಳೊಂದಿಗೆ ಪೊಲೀಸರು ಶಾಮೀಲಾಗಿರುವುದು ಕಂಡು ಬಂದರೆ ಅಂತವರ

ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.ದೌರ್ಜನ್ಯ ಪ್ರಕರಣಗಳಲ್ಲಿ ಅಂಗವೈಕಲ್ಯತೆ ಉಂಟಾದಲ್ಲಿ ನೀಡಲಾಗುವ ವೈದ್ಯಕೀಯ ಪರಿಹಾರದ ಮೊತ್ತವನ್ನು ಹೆಚ್ಚಿಸುವ ಕುರಿತು ಪರಿಶೀಲನೆ ನಡೆಸಲಾಗುವುದು ಎಂದು ಭರವಸೆ ನೀಡಿದ್ದಾರೆ.

*******

ಧರ್ಮಸ್ಥಳ ಪ್ರಕರಣ ಕುರಿತಂತೆ ಎಸ್‌ಐಟಿ ತನಿಖೆಗೆ ಕಾಲಾವಕಾಶ ನಿಗದಿಗೊಳಿಸಿಲ್ಲ ಎಂದು ಗೃಹ ಸಚಿವ ಡಾ ಜಿ. ಪರಮೇಶ್ವರ್ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣದಲ್ಲಿ ಸತ್ಯಾಸತ್ಯತೆ ತಿಳಿಯಲು ಎಸ್‌ಐಟಿ ರಚನೆ ಮಾಡಲಾಗಿದೆ. ಎಸ್‌ಐಟಿ ತನಿಖೆ ವೇಳೆ ರಾಜಕೀಯ ಮಾಡುವ ಅವಶ್ಯಕತೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ವಿಶೇಷ ತನಿಖಾ ತಂಡ ಸ್ವತಂತ್ರವಾಗಿ ತನಿಖೆ ನಡೆಸುತ್ತಿದ್ದು ಸರ್ಕಾರ ಹಸ್ತಕ್ಷೇಪ ಮಾಡುತ್ತಿಲ್ಲ.ದೂರುದಾರ ಚಿನ್ನಯ್ಯ ನನ್ನು ಬಂಧಿಸಿ ತನಿಖೆಗೆ ಒಳಪಡಿಸಲಾಗುತ್ತಿದೆ. ಸತ್ಯವನ್ನು ಹೊರ ತರುವುದೇ ನಮ್ಮ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

****ಧ್ವನಿ **** ಪರಮೇಶ್ವರ್

ಇದೇ ವೇಳೆ ದಸರಾ ನಾಡಹಬ್ಬವಾಗಿದ್ದು ಯಾವುದೇ ಜಾತಿ, ಧರ್ಮಕ್ಕೆ ಸೀಮಿತವಲ್ಲ. ಈ ಹಿಂದೆಯೂ ಸಾಹಿತಿ ನಿಸಾರ್ ಅಹಮದ್ ದಸರಾ ಉದ್ಘಾಟಿಸಿದ್ದಾರೆ. ಮೈಸೂರು ದಿವಾನರಾಗಿ ಸರ್ ಮಿರ್ಜಾ ಇಸ್ಮಾಯಿಲ್ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ. ದಸಾರ ಯಾವುದೇ ಧರ್ಮ, ಜಾತಿಗೆ ಸೀಮಿತವಲ್ಲ ಎಂದು ಸಾಹಿತಿ ಭಾನುಮುಸ್ತಾಕ್ ಉದ್ಘಾಟನಾ ಕಾರ್ಯಕ್ರಮವನ್ನು ಪರಮೇಶ್ವರ್ ಸಮರ್ಥಿಸಿಕೊಂಡಿದ್ದಾರೆ.

*******

ಕೇಂದ್ರ ಸರ್ಕಾರದ ವಿರುದ್ಧ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾರಿ ನಿರ್ದೇಶನಾಲಯ, ಐಟಿ ಹಾಗೂ ಸಿಬಿಐ ನಂತಹ ತನಿಖಾ ಸಂಸ್ಥೆಗಳನ್ನು ಕಾರ್ಯ ನಿರ್ವಹಿಸಲು ಬಿಡುತ್ತಿಲ್ಲ ಎಂದು ದೂರಿದ್ದಾರೆ. ಈ ಹಿಂದೆಯೂ ಕಾಂಗ್ರೆಸ್ ಸಂಸದರು, ಶಾಸಕರು ಹಾಗೂ ನಾಯಕರ ಮನೆ, ತನಿಖಾ ಸಂಸ್ಥೆಗಳಿಗೆ ಬಿಜೆಪಿ, ಜೆಡಿಎಸ್ ನಾಯಕರು ಕಾಣಿಸುವುದಿಲ್ಲ ಎಂದು ಆರೋಪಿಸಿದ್ದಾರೆ. ನಾಡಹಬ್ಬ ದಸರಾ ಉದ್ಘಾಟನೆಗೆ ಜಾತಿ ಮುಖ್ಯವಲ್ಲ ಸಾಧನೆ ಮುಖ್ಯ, ಇಂತಹ ಕಾರ್ಯಕ್ರಮಗಳಲ್ಲಿ ಜಾತಿ ತರುವುದು ಶೋಭೆಯಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*******

ಅಕ್ರಮ ಬೆಟ್ಟಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತ ಶಾಸಕ ಕೆ.ಸಿ. ವೀರೇಂದ್ರ ವಿಚಾರಣೆಯನ್ನು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತೀವ್ರಗೊಳಿಸಿದ್ದಾರೆ. ವೀರೇಂದ್ರ ಅವರನ್ನು ವಿದೇಶಿ ಶೆಲ್ ಕಂಪನಿಗಳು ಮತ್ತು ವಿದೇಶಿ ಹಣಕಾಸು ವಹಿವಾಟು ಸಂಪರ್ಕದ ಆರೋಪದ ಮೇಲೆ ಬಂಧಿಸಲಾಗಿತ್ತು. ಶ್ರೀಲಂಕಾ, ನೇಪಾಳ ಮತ್ತು ಜಾರ್ಜಿಯಾ ಮೂಲದ ಕ್ಯಾಸಿನೋಗಳು ಮತ್ತು ಶೆಲ್ ಕಂಪನಿಗಳೊಂದಿಗೆ ವಹಿವಾಟು ನಡೆಸಿದ್ದಾರೆ ಎಂದು ಪ್ರಾಥಮಿಕ ತನಿಖೆಯಲ್ಲಿ ದೃಢಗೊಂಡಿದೆ. ತಮಿಳುನಾಡಿನ ಲಾಟರಿ ರಾಜ ಸ್ಯಾಂಟಿಯಾಗೊ ಮಾರ್ಟಿನ್ ಅವರಿಂದ ಕ್ಯಾಸಿನೋ ಖರೀದಿಸಲು ಶಾಸಕ ವೀರೇಂದ್ರ ಈಗಾಗಲೇ ಒಪ್ಪಂದ ಮಾಡಿಕೊಂಡಿದ್ದಾರೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ.

*******

ರಾಜ್ಯಾದ್ಯಂತ ಗೌರಿ-ಗಣೇಶ ಹಬ್ಬದ ಸಂಭ್ರಮ ಮನೆ ಮಾಡಿದೆ. ಈ ನಡುವೆ ಮೈಸೂರಿನಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಗಣಪತಿ ಪ್ರತಿಷ್ಠಾಪನೆ ಮಾಡುವ ಸಂದರ್ಭದಲ್ಲಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ಸಾರ್ವಜನಿಕವಾಗಿ ಗಣಪತಿ ಪ್ರತಿಷ್ಠಾಪನೆ ಮಾಡುವ ಸಂಘ-ಸಂಸ್ಥೆಗಳಿಗೆ ಮಾರ್ಗಸೂಚಿ ಹೊರಡಿಸಿದೆ. ಮಳೆಗಾಲ ಇರುವುದರಿಂದ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕಿದ್ದು, ವಿದ್ಯುತ್ ಕಂಬಗಳು, ವಿದ್ಯುತ್ ಪರಿವರ್ತಕಗಳಿಗೆ ಬ್ಯಾನರ್, ಫಲಕಗಳನ್ನು ಕಟ್ಟಬಾರದು ಎಂದು ನಿರ್ದೇಶನ ನೀಡಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬವನ್ನು ಸೌಹಾರ್ದಯುತವಾಗಿ ಆಚರಣೆ ಮಾಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದ ಹಲವೆಡೆ ಇಂದು ಪೊಲೀಸ್ ಸಿಬ್ಬಂದಿಯೊಂದಿಗೆ ರೂಟ್ ಮಾರ್ಚ್ ನಡೆಸಿದ ಬಳಿಕ ಮಾತನಾಡಿದ ಅವರು, ಹಬ್ಬಗಳ ಸಂದರ್ಭದಲ್ಲಿ ಯಾವುದೆ ಅಹಿತಕರ ಘಟನೆಗಳಿ ನಡೆಯಬಾರದು ಎಂದು ಸೂಚಿಸಿದ್ದಾರೆ. ವಿಜಯನಗರ ಜಿಲ್ಲೆಯಲ್ಲಿಂದು ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಮುಂಜಾಗೃತೆಗಾಗಿ ಪೊಲೀಸ್ ಅಧಿಕ್ಷಕ ಅರುಣಾಮಶ್ಕು ಗಿರಿ ನೇತೃತ್ವದಲ್ಲಿ ಜಿಲ್ಲೆಯ ಎಲ್ಲ ಉಪವಿಭಾಗಗಳಲ್ಲಿ ಪಥ ಸಂಚಲನ ಮತ್ತು ರೂಟ್ ಮಾರ್ಚ್ ನಡೆಸಲಾಯಿತು. ದಾವಣಗೆರೆ ಜಿಲ್ಲೆಯಲ್ಲಿ ಸಾಮಾಜಿಕ ಮಾಧ್ಯಮಗಳ ಮೇಲೆ ನಿಗಾವಹಿಸಲಾಗಿದ್ದು, ಪ್ರಚೋದನಾಕಾರಿ ಸಂದೇಶಗಳನ್ನು ಹರಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ಜಿಲ್ಲೆಯ ೩೫ ಸ್ಥಳಗಳಲ್ಲಿ ಚೆಕ್‌ಪೋಸ್ಟ್ ಗಳನ್ನು ತೆರೆಯಲಾಗಿದ್ದು, ಒಳ ಹಾಗೂ ಹೊರ ಹೋಗುವ ವ್ಯಕ್ತಿ ಹಾಗೂ ವಾಹನಗಳ ಮೇಲೆ ನಿಗಾವಹಿಸಲಾಗಿದೆ ಎಂದು ಹೇಳಿದ್ದಾರೆ.

****ಧ್ವನಿ****ಉಮಾ ಪ್ರಶಾಂತ್

*******

ಗೌರಿ-ಗಣೇಶ ಹಬ್ಬದ ಪ್ರಯುಕ್ತ ಇಂದಿನಿಂದ ಇದೇ ೩೧ರ ವರೆಗೆ ಕೆಎಸ್‌ಆರ್‌ಟಿ ರಾಜ್ಯದ ವಿವಿಧ ಜಿಲ್ಲೆಗಳಿಗೆ ಹಾಗೂ ನೆರೆ ರಾಜ್ಯಗಳಿಗೆ ಒಂದು ಸಾವಿರದ ೫೦೦ಕ್ಕೂ ಹೆಚ್ಚು ಬಸ್‌ಗಳನ್ನು ಓಡಿಸಲು ನಿರ್ಧರಿಸಿದೆ. ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ನಿಲ್ದಾಣ, ಶಾಂತಿ ನಗರದಿಂದ ಬಸ್ ಸಂಪರ್ಕ ಕಲ್ಪಿಸಲಾಗಿದೆ. ಮುಂಬೈ, ಪುಣೆ, ಗೋವಾ ಮತ್ತು ಮಂಗಳೂರಿನಿಂದ ಆಗಸ್ಟ್ ೨೭ ರಿಂದ ೩೧ರ ವರೆಗೆ ಹಿಂದಿರುಗುವ ಸೇವೆಯನ್ನು ಕಲ್ಪಿಸಲಾಗಿದೆ.

*******

ಬಿಬಿಎಂಪಿ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಂಗ್ರಹಣೆಯ ಆಟೋ ಟಿಪ್ಪರ್ ವಾಹನಗಳ ಹಾಜರಾತಿ ದಾಖಲೆ ಸಮಯವನ್ನು ಪರಿಷ್ಕರಿಸಲಾಗಿದೆ. ಇಂದಿನಿಂದ ವಾಹನಗಳ ಸ್ಕ್ಯಾನಿಂಗ್ ಸಮಯವನ್ನು ಬೆಳಿಗ್ಗೆ ೫.೩೦ ರಿಂದ ೭.೩೦ ರವರೆಗೆ ನಿಗದಿಪಡಿಸಲಾಗಿದೆ. ಸ್ವಚ್ಛತಾ ಕಾರ್ಯಗಳ ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವಂತೆ ನಗರದ ವಿವಿಧ ವಾರ್ಡ್ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಟೋ ಟಿಪ್ಪರ್ ವಾಹನಗಳ ಹಾಜರಾತಿ ದಾಖಲೆ ಸಮಯವನ್ನು ಪರಿಷ್ಕರಿಸಲಾಗಿದೆ.

*******

ಮೈಸೂರಿನ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಇಂದಿನ ದಿನದ ಮೊದಲ ಪಂದ್ಯದಲ್ಲಿ ನಮ್ಮ ಶಿವಮೊಗ್ಗ ಮತ್ತು ಹುಬ್ಬಳ್ಳಿ ಟೈಗರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩.೧೫ಕ್ಕೆ ಆರಂಭವಾಗಲಿದೆ. ಎರಡನೇ ಪಂದ್ಯದಲ್ಲಿಂದು ಮಂಗಳೂರು ಡ್ರ್ಯಾಗನ್, ಗುಲ್ಬರ್ಗಾ ಮಿಸ್ಟ್ರಿಸ್ ತಂಡವನ್ನು ಎದುರಿಸಲಿದೆ.

******